**ಜಿಲ್ಲಾಧಿಕಾರಿಯವರ ಕಾರ್ಯಾಲಯ, ಉಡುಪಿ ಜಿಲ್ಲೆ, ಉಡುಪಿ**

ದೂರವಾಣಿ ಸಂಖ್ಯೆ : 0820-2574925,2574924 website : www.udupi.nic.in

ಫ್ಯಾಕ್ಸ್ ಸಂಖ್ಯೆ : 0820-2574926 E-mail : deo.udupi@gmail.com


---

**"ನ್ಯಾಯಯುತ ಪರಿಹಾರದ ಹಕ್ಕು ಮತ್ತು ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಯ್ದೆ, 2013 ರ ಕಲಂ 11(1) ರಡಿಯಲ್ಲಿ ಮಾಡಿದ ಪ್ರಾಥಮಿಕ ಅಧಿಸೂಚನೆ"**

ಕ್ರಮಾಂಕ : ನಂ ಎಲ್‌ಎಕ್ಯೂ ಸಿಆರ್ ೨೦/೨೦೧೮/ಇ 33344 ದಿನಾಂಕ ೨೧-೧೨-೨೦೧೮

ಈ ಕೆಳಗಿನ ಅನುಸೂಚಿಯಲ್ಲಿ ಕಾಣಿಸಿದ ಜಮೀನುಗಳು ಸಾರ್ವಜನಿಕ ಉದ್ದೇಶವಾಗಿರುವ ವಾರಾಹಿ ಎಡದಂಡೆ ಮುಖ್ಯ ನಾಲೆಯ ರಚನೆಗೆ ಕುಂದಾಪುರ ತಾಲೂಕು ತೆಕ್ಕಟ್ಟೆ ಗ್ರಾಮದ ಈ ಕೆಳಗಿನ ಅನುಸೂಚಿಯಲ್ಲಿ ಕಾಣಿಸಿದ ಜಮೀನುಗಳು ಈ ಮೇಲಿನಂತೆ ವಿವರಿಸಿದ ಸಾರ್ವಜನಿಕ ಉದ್ದೇಶಕ್ಕಾಗಿ ಭೂಸ್ವಾಧೀನ ಕುರಿತು ಬೇಕಾಗುವುದೆಂದು ಜಿಲ್ಲಾಧಿಕಾರಿಗಳು ಉಡುಪಿ ಇವರಿಗೆ ಕಂಡು ಬಂದಿದೆ.

ಈ ಮೂಲಕ ತಿಳಿಸುವುದೇನೆಂದರೆ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕ ಮತ್ತು ಸೂಕ್ತ ಪರಿಹಾರದ ಹಕ್ಕು, ಪುನರ್ವಸತಿ ಮತ್ತು ನಿರ್ಮಾಣ ಕಾಯ್ದೆ 2013ರ (ದಿನಾಂಕ 01-01-2014 ರಿಂದ ಜಾರಿಗೆ ತಂದ ಅಧಿಸೂಚನೆ ಪ್ರಕಾರ) ಕಲಂ 11 ರ ಸೌಲಭ್ಯದ ಮೇರೆಗೆ (2013 ಕೇಂದ್ರದ 30ನೇ ಕಾಯ್ದೆ) ಸದ್ರಿ ಕಾನೂನಿನ 12ರ ಮೇರೆಗೆ ಪ್ರದತ್ತವಾದ ಅಧಿಕಾರ ಚಲಾಯಿಸುವಂತೆ ಜಿಲ್ಲಾಧಿಕಾರಿಗಳು ಉಡುಪಿ ರವರು ಈ ಮೂಲಕ ಕಾರ್ಯಪಾಲನೆ ಪ್ರಾಧಿಕಾರವನ್ನು ಭೂಸ್ವಾಧಿನಾಧಿಕಾರಿ ಮತ್ತು ಸಹಾಯಕ ಕಮೀಷನರ್ ಕುಂದಾಪುರ ಇವರಿಗೆ ನೀಡಲಾಗಿದೆ. ಹಾಗೂ ಕಲಂ 43ರ ಮೇರೆಗೆ ಪುನರ್‌ವಸತಿ ಮತ್ತು ಪುನರ್‌ನಿರ್ಮಾಣದ ಅಧಿಕೃತ ಪ್ರಾಧಿಕಾರದ ಕಾರ್ಯಪಾಲನೆಯನ್ನು ಅಪರ ಜಿಲ್ಲಾಧಿಕಾರಿಗಳು ಉಡುಪಿ ಇವರಿಗೆ ನೀಡಲಾಗಿದೆ.

ಸರ್ಕಾರದ ಆದೇಶದ ಸಂಖ್ಯೆ ಕಂಇ/76/ಭೂಸ್ವಾವಿ/2014 ದಿನಾಂಕ 30-06-2014 ರನ್ವಯ ಕಲಂ 6(2)ರ ಅಡಿಯಲ್ಲಿ ನೀರಾವರಿ ಯೋಜನೆಗಳಿಗಾಗಿ ಭೂಸ್ವಾಧೀನ ಪಡಿಸುವಾಗ ಪರಿಸರದ ಮೇಲಿನ ಪರಿಣಾಮ ನಿರ್ಧರಣ ಅಂಶ (Environmental Impact Assessment) ಪ್ರಕ್ರಿಯೆಯನ್ನು ಬೇರಾವುದೇ ಕಾಯ್ದೆಯಡಿಯಲ್ಲಿ ಮಾಡಬೇಕಾದಲ್ಲಿ ಸಾಮಾಜಿಕ ನಿರ್ಧರಣದ ಅಂಶ (Social Impact Assessment) ವಾರಾಹಿ ನೀರಾವರಿ ಯೋಜನೆಗೆ ಅನ್ವಯಿಸುವದಿಲ್ಲವೆಂದು ಸ್ಪಷ್ಟೀಕರಿಸಿದೆ.

2013 ಕಾಯ್ದೆ ಕಲಂ 15(1)ರ ಮೇರೆಗೆ ಆಸಕ್ತಿವುಳ್ಳವರು ಭೂಸ್ವಾಧೀನತೆ ಕುರಿತು ತಮ್ಮ ಆಕ್ಷೇಪಣೆಗಳನ್ನು ಈ ಅಧಿಸೂಚನೆ ಪ್ರಕಟಗೊಂಡ 60 ದಿನದೊಳಗೆ ಭೂಸ್ವಾಧೀನಾಧಿಕಾರಿ ಹಾಗೂ ಸಹಾಯಕ ಕಮೀಷನರ್ ಇವರಿಗೆ ಸಲ್ಲಿಸಬೇಕು ಅನಂತರ ಬಂದ ಆಕ್ಷೇಪಣೆಯನ್ನು ಯಾವುದೇ ಮುನ್ಸೂಚನೆ ನೀಡದೇ ವಿಲೇಯಕ್ಕೆ ಹಾಕಲಾಗುವುದು.

ಈ ಜಮೀನು ಸ್ವಾಧೀನ ಕೆಲಸ ನಿರ್ವಹಿಸುವಲ್ಲಿ ಸರ್ಕಾರದಿಂದ ನೇಮಿಸಲ್ಪಟ್ಟ ಮೋಜಣಿದಾರರಿಗಾಗಲಿ ಅಥವಾ ಈ ಕೆಲಸ ಮಾಡುವವರಿಗಾಗಲೀ ಯಾರೂ ಅಡ್ಡಿ ಮಾಡಕೂಡದೆಂದು ಎಚ್ಚರಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರದ ಹಕ್ಕು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ ಕಲಂ 11(1)ರ ಮೇರೆಗೆ ಈ ಅಧಿಸೂಚನೆ ಪ್ರಕಟಗೊಂಡ ದಿನಾಂಕದಿಂದ ಸದರಿ ಸ್ವಾಧೀನಪಡಿಸಿಕೊಳ್ಳಲಿರುವ ಭೂಮಿಯನ್ನು ಒಪ್ಪಂದದ ಮೇರೆಗೆ ವಿಕ್ರಯಿಸುವ, ಭೋಗ್ಯಕ್ಕೆ ಅಡವಿಡುವ, ಅನುಭವಿಸುವ, ಬದಲಾಯಿಸುವ ಅಥವಾ ಇನ್ನು ಯಾವುದೇ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳದಂತೆ ನಿರ್ಬಂದಿಸಿದೆ. ಅಂತಹ ಯಾವುದೇ ಕ್ರಮ ಅಥವಾ ಇನ್ನಾವುದೇ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಲ್ಲಿ ಅದನ್ನು ಐತೀರ್ಪು ರಚಿಸುವಾಗ ಗಣನೆಗೆ ತೆಗೆದುಕೊಳ್ಳದೇ ಅಂತಿಮವಾಗಿ ಸದರಿ ಕಾಯ್ದೆ ಅನ್ವಯ ಭೂಸ್ವಾಧೀನ ಪಡಿಸಿಕೊಳ್ಳಲಾಗುವುದೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಜಿಲ್ಲೆ – ಉಡುಪಿ ತಾಲೂಕು : ಕುಂದಾಪುರ ಹೋಬಳಿ : ಕುಂದಾಪುರ ಗ್ರಾಮ : ತೆಕ್ಕಟ್ಟೆ

| ಕ್ರ.ಸಂ | ಖಾತೆದಾರರ ಹೆಸರು | ಸ.ನಂಬ್ರ | ತರಹೆ | ಚಕ್ಕುಬಂದಿ | | | | ಭೂಸ್ವಾಧೀನ ವಿವರ | | ಷರಾ |
|---|---|---|---|---|---|---|---|---|---|---|
| | | | | ಉತ್ತರ | ದಕ್ಷಿಣ | ಪೂರ್ವ | ಪಶ್ಚಿಮ | ವಿಸ್ತೀರ್ಣ | ಮೌಲ್ಯ | |
| 1 | ಮಹಾದೇವಿ ಕೋಂ ಹೆರಿಯ ಕುಲಾಲ | 315/2ಬಿ | ತರಿ | 316 | 315/4 | 315/3 | 315/2ಎ | 0.15 | 0.97 | |
| | ಒಟ್ಟು | | | | | | | 0.15 | | |

ಭೂಸ್ವಾಧೀನಾಧಿಕಾರಿ ಹಾಗೂ
ಸಹಾಯಕ ಕಮೀಷನರ್, ಕುಂದಾಪುರ

ಜಿಲ್ಲಾಧಿಕಾರಿ
ಉಡುಪಿ ಜಿಲ್ಲೆ, ಉಡುಪಿ

ಪಿ.ಆರ್. 16 ಬಿ.ಪ್ರ (10)